# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಎಚ್.ರಸ್ತೆ, ತುಮಕೂರು-572 103, ☎ : 0816-2255650, 2273511 ಫ್ಯಾಕ್ಸ್ : 0816- 2270719


ಸಂಖ್ಯೆ:ತುವಿ: ಪ.ವಿ: 2015-16 : 596. ದಿನಾಂಕ: 15.07.2016

**ಅಧಿಸೂಚನೆ**

**ವಿಷಯ:** 2014-15ನೇ ಶೈಕ್ಷಣಿಕ ಸಾಲಿನ ಸ್ನಾತಕ ಶಿಕ್ಷಣ ಪದವಿಯ ಪ್ರಥಮ ಸೆಮಿಸ್ಟರ್ (ನವೀನ) ವಿಶೇಷ ಪರೀಕ್ಷೆಯ ವೇಳಾಪಟ್ಟಿ, ಪರೀಕ್ಷಾ ಕೇಂದ್ರ ಘೋಷಣೆ ಮತ್ತು ಪರೀಕ್ಷಾ ಮುಖ್ಯ ಅಧೀಕ್ಷಕರು ನೇಮಕಾತಿ ಕುರಿತು.

**ಉಲ್ಲೇಖ:**1. ಪ್ರಾಂಶುಪಾಲರ ಮನವಿ ಪತ್ರ ದಿನಾಂಕ 05.07.2016

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:15.07.2016

* * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರ ಪತ್ರದಲ್ಲಿ ಈ ಕೆಳಗಿನಂತೆ ಪ್ರಾಂಶುಪಾಲರ ಪತ್ರದಲ್ಲಿ ರಿಟ್ ಅರ್ಜಿ ಸಂಖ್ಯೆ:22024-22037/2015(EDN-EX) ಗೆ ಸಂಬಂಧಿಸಿದಂತೆ ಕರ್ನಾಟಕದ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶವು ಪರೀಕ್ಷಾದಿನದಂದು ತಡವಾಗಿ ವಿಶ್ವವಿದ್ಯಾನಿಲಯಕ್ಕೆ ತಲುಪಿದ ಕಾರಣ 13 ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಳ್ಳಲು ಅವಕಾಶ ನೀಡಿರುವುದಿಲ್ಲವಾದ್ದರಿಂದ ಪರೀಕ್ಷೆ ನೀಡುವಂತೆ ಕೋರಿರುತ್ತಾರೆ. ಆದ್ದರಿಂದ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯದ ಹಿತದೃಷ್ಟಿಯಿಂದ ಉಲ್ಲೇಖ (2)ರ ಮಾನ್ಯ ಕುಲಪತಿಯವರ ಅನುಮೋದನೆ ಮೇರೆಗೆ ಸದರಿ 13 ವಿದ್ಯಾರ್ಥಿಗಳಿಗೆ **ಪ್ರಥಮ ಸೆಮಿಸ್ಟರ್‌ನ** Education in Emerging India ಪತ್ರಿಕೆಯ ವಿಶೇಷ ಪರೀಕ್ಷೆಯನ್ನು ನಡೆಸುವುದು.

ಭಾರತಿ ಶಿಕ್ಷಣ ಮಹಾವಿದ್ಯಾಲಯ, ತುಮಕೂರು ಈ ಕಾಲೇಜಿನ 2014-15ನೇ ಶೈಕ್ಷಣಿಕ ಸಾಲಿನ ನವೀನ ವಿದ್ಯಾರ್ಥಿಗಳಿಗೆ(Freshers) ವಿಶೇಷ ಪ್ರಕರಣವೆಂದು ಪರಿಗಣಿಸಿ **ದಿನಾಂಕ 21.07.2016 ರಂದು ಮಧ್ಯಾಹ್ನ 2.00 ಗಂಟೆಗೆ ಪ್ರಥಮ ಸೆಮಿಸ್ಟರ್‌ನ** Education in Emerging India ಪತ್ರಿಕೆಯ ಪರೀಕ್ಷೆಯನ್ನು ನಡೆಸುವುದು.

ಸದರಿ ಪರೀಕ್ಷೆಗೆ **ಪರೀಕ್ಷಾ ಕೇಂದ್ರವನ್ನಾಗಿ ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ಬಿ.ಎಚ್. ರಸ್ತೆ, ತುಮಕೂರು** ಇದನ್ನು ಘೋಷಿಸಲಾಗಿದೆ.

ಸದರಿ ಪರೀಕ್ಷಾ ಕೇಂದ್ರಕ್ಕೆ **ಪ್ರಾಂಶುಪಾಲರು ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು** ಇವರನ್ನು ಮುಖ್ಯ ಅಧೀಕ್ಷಕರನ್ನಾಗಿ ನೇಮಿಸಲಾಗಿದೆ.

ಪರೀಕ್ಷಾ ಕಾರ್ಯಗಳಲ್ಲಿ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಕೂಡಲೇ **ಕುಲಸಚಿವರು(ಮೌಲ್ಯಮಾಪನ)-ಮೊ.ಸಂ.**-9448261860, **ಉಪಕುಲಸಚಿವರು (ಮೌಲ್ಯಮಾಪನ)-ಮೊ.ಸಂ.**-8970968688, **ವಿಶೇಷಾಧಿಕಾರಿಗಳು (ಮೌಲ್ಯಮಾಪನ) -ಮೊ.ಸಂ.**- 7760876622 **ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರುಗಳನ್ನು ಸಂಪರ್ಕಿಸಿ ಮುಂದಿನ ಕ್ರಮ ಕೈಗೊಳ್ಳುವುದು.

**ಪರೀಕ್ಷಾ ಮುಖ್ಯ ಅಧೀಕ್ಷಕರುಗಳಿಗೆ (Examination Chief Superintendent) ಸೂಚನೆಗಳು:**

1. ಪರೀಕ್ಷಾ ಮುಖ್ಯ ಅಧೀಕ್ಷಕರಾಗಿ ಕಾರ್ಯ ನಿರ್ವಹಿಸುವವರು ಪರೀಕ್ಷಾ ದಿನದಂದು ಪರೀಕ್ಷಾ ಸಮಯಕ್ಕಿಂತ **ಅರ್ಧ ಗಂಟೆ** ಮುಂಚಿತವಾಗಿ ಕಾಲೇಜಿಗೆ ಬಂದು ಮೊಹರು ಮಾಡಿದ ಪ್ರಶ್ನೆ ಪತ್ರಿಕೆ ಲಕೋಟೆಯನ್ನು ತಮ್ಮ ಸಮ್ಮುಖದಲ್ಲೇ ತೆರೆದು ಪರೀಕ್ಷಾ ಕೊಠಡಿಗೆ ವಿತರಿಸುವ ವ್ಯವಸ್ಥೆ ಮಾಡಬೇಕು. ಮುಖ್ಯ ಅಧೀಕ್ಷಕರು ಇಲ್ಲದೆ ಇದ್ದಾಗ ಅನಧಿಕೃತವಾಗಿ ಬೇರೆ ಯಾರು ಕೂಡ ಪ್ರಶ್ನೆ ಪತ್ರಿಕೆಗಳ ಲಕೋಟೆಯನ್ನು ತೆರೆಯಬಾರದು.

(2 ನೇ ಪುಟಕ್ಕೆ)

2. ಪ್ರಾಂಶುಪಾಲರು ಕಾಲೇಜಿನ ಹಿರಿಯ ಅಧ್ಯಾಪಕರಿಗೆ ಮುಖ್ಯ ಅಧೀಕ್ಷಕರ ಜವಾಬ್ದಾರಿ ವಹಿಸಿ ಪರೀಕ್ಷಾ ಕಾರ್ಯದಿಂದ ಗೈರು ಹಾಜರಾಗುವುದು. ಪರೀಕ್ಷಾ ದಿನದಂದು ತಡವಾಗಿ ಕಾಲೇಜಿಗೆ ಬರುವುದು, ಪರೀಕ್ಷಾ ದಿನದಲ್ಲಿ ಪ್ರಶ್ನೆ ಪತ್ರಿಕೆ ವಿತರಿಸುವ ಜವಾಬ್ದಾರಿಯನ್ನು ಕಾಲೇಜಿನ ಅಧ್ಯಾಪಕರಿಗೆ ನಿರ್ವಹಿಸುವಂತೆ ಸೂಚಿಸಿ, ಪರೀಕ್ಷೆ ಮುಗಿಯುವುದಕ್ಕೆ ಮುಂಚಿತವಾಗಿ ಕಾಲೇಜಿನಿಂದ ಹೊರ ಹೋಗುವುದು ಕಂಡುಬಂದಿರುತ್ತದೆ. ಆದ್ದರಿಂದ ಈ ರೀತಿ ಆಗದಂತೆ ಎಚ್ಚರವಹಿಸುವುದು.
3. ಪರೀಕ್ಷಾ ಕಾರ್ಯಗಳಿಗೆ ಸಂಬಂಧಿಸಿದಂತೆ, ಖಾಯಂ ಅಧ್ಯಾಪಕರುಗಳನ್ನೇ ಕಡ್ಡಾಯವಾಗಿ ಬಳಸಿಕೊಳ್ಳುವುದು. ಅಗತ್ಯವಿದ್ದಲ್ಲಿ ಮಾತ್ರ ಅತಿಥಿ ಉಪನ್ಯಾಸಕರುಗಳನ್ನು ಬಳಸಿಕೊಳ್ಳುವುದು.
4. ಯಾವುದೇ ಕಾರಣಕ್ಕೂ ಪರೀಕ್ಷಾ ಅಕ್ರಮಗಳು ನಡೆಯದಂತೆ ನೋಡಿಕೊಳ್ಳುವ ಜವಾಬ್ದಾರಿ ಮತ್ತು ಪರೀಕ್ಷಾ ಪಾವಿತ್ರತೆಯನ್ನು ಕಾಪಾಡುವುದು ತಮ್ಮ ಹೊಣೆಗಾರಿಕೆಯಾಗಿರುತ್ತದೆ.
5. Question Paper Codeಗೆ ಅನುಸಾರವಾಗಿ ಉತ್ತರ ಪತ್ರಿಕೆ ಪುಸ್ತಕಗಳನ್ನು Room Superintendents Invigilation Dairy ಯೊಂದಿಗೆ ಪ್ಯಾಕ್ ಮಾಡುವುದು ಹಾಗೂ ಆ ಪ್ಯಾಕ್‌ನ ಮೇಲೆ ದಿನಾಂಕ, ವಿಷಯ, ಕಾಲೇಜಿನ ಕೋಡ್, ಕಾಲೇಜಿನ ಹೆಸರು ಮತ್ತು ವಿಳಾಸ, Question Paper Codeನ್ನು ಹಾಗೂ ಬಂಡಲ್‌ನಲ್ಲಿರುವ ಒಟ್ಟು ಉತ್ತರ ಪತ್ರಿಕೆಗಳ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು.
6. ಪ್ರಶ್ನೆ ಪತ್ರಿಕೆಯು ಯಾವ ಕಾರಣಕ್ಕೂ ಪರೀಕ್ಷೆಯ ಸಮಯಕ್ಕಿಂತ ಮುಂಚೆ ಬಹಿರಂಗಗೊಳ್ಳದಂತೆ ಪ್ರಾಂಶುಪಾಲರು/ಮುಖ್ಯ ಅಧೀಕ್ಷಕರು ಸುರಕ್ಷಿತವಾಗಿ ಸಂರಕ್ಷಿಸುವುದು, ಗೌಪ್ಯತೆ ಕಾಪಾಡುವುದಕ್ಕೆ ಮೊದಲ ಆದ್ಯತೆ ನೀಡಲು ತಿಳಿಸಿದೆ.
7. ಪ್ರಾಂಶುಪಾಲರು ಪರೀಕ್ಷಾ ದಿನದಂದು ಸಾಂಧರ್ಭಿಕ ರಜೆ/ ಇತರೆ ರಜೆ ಮೇಲೆ ತೆರಳುವ ಸಂದರ್ಭದಲ್ಲಿ ಕುಲಸಚಿವರು(ಮೌಲ್ಯಮಾಪನ) ಇವರಿಗೆ ಮಾಹಿತಿ ನೀಡುವುದು.

<u>ಉತ್ತರ ಪತ್ರಿಕೆಗಳನ್ನು ರವಾನಿಸುವ ಬಗ್ಗೆ ಸೂಚನೆಗಳು:</u>

ಪರೀಕ್ಷಾ ಕೇಂದ್ರಲ್ಲಿ ನಡೆದ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ಪರೀಕ್ಷೆ ಮುಗಿದ ತಕ್ಷಣವೇ ಕಾಲೇಜಿನವರೇ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಸುರಕ್ಷಿತವಾಗಿ ಉತ್ತರ ಪತ್ರಿಕೆಗಳ ಬಂಡಲ್‌ಗಳನ್ನು ವಿಶ್ವವಿದ್ಯಾನಿಲಯಕ್ಕೆ ತಲುಪಿಸುವ ಜವಾಬ್ದಾರಿ ಪರೀಕ್ಷಾ ಮುಖ್ಯ ಅಧೀಕ್ಷಕರದ್ದಾಗಿರುತ್ತದೆ.

**ಮೇಲ್ಕಂಡ ಎಲ್ಲಾ ವಿಷಯಗಳು ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಪಾಲಿಸುವುದು ಮತ್ತು ಪರೀಕ್ಷೆ ಸುಗಮವಾಗಿ ನಡೆಯಲು ಕ್ರಮಕೈಗೊಳ್ಳುವುದು.**

15/7/16

**ಕುಲಸಚಿವರು(ಮೌಲ್ಯಮಾಪನ)**

**ಗೆ**

1. **ಪ್ರಾಂಶುಪಾಲರು, ಭಾರತಿ ಶಿಕ್ಷಣ ಮಹಾವಿದ್ಯಾಲಯ, ತುಮಕೂರು**
2. **ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು.**

**ಪ್ರತಿಗಳು:**

1. ಮಾನ್ಯ ಕುಲಪತಿಯವರ / ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.